ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ : 26ನೇ ಜುಲೈ, 2019

ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

635 (800) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಯಾರ ಸಲಹೆ ಮೇರೆಗೆ ಕಾಮಗಾರಿ ಕೈಗೊಳ್ಳಲಾಗುತ್ತಿದೆ ; ಸ್ಥಳೀಯ ಚುನಾಯಿತ ವಾರ್ಡ್ ಸದಸ್ಯರ ಗಮನಕ್ಕೆ ತರದೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆಯೇ ; ಈ ಬಗ್ಗೆ ಸ್ಥಳೀಯ ಸಂಸ್ಥೆಯ ಜೊತೆ ಚರ್ಚಿಸಲಾಗಿದೆಯೇ ; (ವಿವರ ನೀಡುವುದು)

(ಆ) ಸ್ಮಾರ್ಟ್‌ಸಿಟಿ ಕಂಪನಿಯ ಆಡಳಿತ ವ್ಯವಸ್ಥೆಗೆ ಒಂದು ಕಂಪನಿಗೆ ತಿಂಗಳೊಂದಕ್ಕೆ ತಗಲುವ ವೆಚ್ಚವೆಷ್ಟು ; (ವಿವರ ನೀಡುವುದು)

(ಇ) ಸ್ಮಾರ್ಟ್‌ಸಿಟಿಯಲ್ಲಿ ಕೈಗೊಳ್ಳುವ ಕಾಮಗಾರಿ ಮತ್ತು ಸ್ಥಳೀಯ ಆಡಳಿತ ಸಂಸ್ಥೆಗೆ ಸಂಬಂಧ ಇಲ್ಲವೆಂಬ ದೂರುಗಳಿದ್ದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಶಿವಮೊಗ್ಗ ಮಹಾನಗರ ಪಾಲಿಕೆ ಸ್ಮಾರ್ಟ್‌ಸಿ   ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಕೈಗೊಂಡ ಕಾಮಗಾರಿಗಳು ಯಾವುವು ;

(ಉ) ಸ್ಮಾರ್ಟ್‌ಸಿಟಿ ಯೋಜನೆಯಡಿಯಲ್ಲಿ ಕಾಮಗಾರಿಗಳು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಯೋಜನೆಯಡಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳಲ್ಲಿ

ಕಳಪೆ ಕಾಮಗಾರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಇದುವರೆಗೂ ಈ ಯೋಜನೆಯಡಿಯಲ್ಲಿ ಎಷ್ಟು ಹಣ ಖರ್ಚಾಗಿರುತ್ತದೆ ?